# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 165 |
| ಸದಸ್ಯರ ಹೆಸರು | : | ಶ್ರೀ ಪಿ.ಹೆಚ್.ಪೂಜಾರ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 18.08.2026 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಇತ್ತೀಚೆಗೆ ಮಹಾರಾಷ್ಟ್ರ ಹಾಗೂ ಇನ್ನಿತರ ರಾಜ್ಯಗಳಲ್ಲಿ ರೈತರಿಗೆ ನೆರವಾಗುವಂತೆ ಕೃಷಿ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನ ಅಳವಡಿಸಿ ಕಾರ್ಯಕ್ರಮಗಳನ್ನು ಹಾಕಿಕೊಂಡು<br>ಭೂಮಿಯ ಗುಣಧರ್ಮ. ಫಲವತ್ತತೆ, ವಾತಾವರಣದಲ್ಲಿಯ ದಿಢೀರ್ ಬದಲಾವಣೆ ಎದುರಿಸುವ ತಂತ್ರಜ್ಞಾನ ಜತೆಗೆ ಕಡಿಮೆ ನೀರಿನಲ್ಲಿ ಕಬ್ಬು ಮುಂತಾದ ಪೀಕುಗಳಲ್ಲಿ ಉತ್ಕೃಷ್ಟವಾದ ಹೆಚ್ಚುವರಿ ಉತ್ಪನ್ನ ಪಡೆಯುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು, ಬಂದಿರುತ್ತದೆ. |
| ಆ | ಬಂದಿದ್ದಲ್ಲಿ, ರಾಜ್ಯದಲ್ಲಿ ಕೂಡಾ ಕೃಷಿ ಕ್ಷೇತ್ರಕ್ಕೆ ಸಹಾಯಕಾರಿಯಾದ ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನ ಅಳವಡಿಸುವಂತಹ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗುವುದೇ? (ಮಾಹಿತಿ ಒದಗಿಸುವುದು) | • 2025-26ರ ಆಯವ್ಯಯ ಭಾಷಣದ ಕಂಡಿಕೆ 34 ರಲ್ಲಿ ಮಾನ್ಯ ಮುಖ್ಯಮಂತ್ರಿಗಳು "ಜಾಗತಿಕ ಮಟ್ಟದಲ್ಲಿ ಡಿಜಿಟಲ್, ಕೃತಕ ಬುದ್ಧಿಮತ್ತೆ ಹಾಗೂ ಜಿಯೋ ಸ್ಪೇಷಿಯಲ್ ಕ್ಷೇತ್ರದಲ್ಲಿ ಆಗುತ್ತಿರುವ ಆವಿಷ್ಕಾರಗಳನ್ನು ಕೃಷಿ ಕ್ಷೇತ್ರದಲ್ಲಿ ಅಳವಡಿಸಿ, ಡಿಜಿಟಲ್ ಕೃಷಿ ಸೇವೆಗಳ ಕೇಂದ್ರವನ್ನು ಸ್ಥಾಪಿಸಲಾಗುವುದು. ಈ ಕೇಂದ್ರವು ರೈತರಿಗೆ ಮತ್ತು ನೀತಿ ನಿರೂಪಕರಿಗೆ ಬೆಳೆಗಳ ಕುರಿತು ನಿಖರವಾದ ತೀರ್ಮಾನವನ್ನು ಕೈಗೊಂಡು ಬೆಳೆಗಳಲ್ಲಿ ಉತ್ಪಾದಕತೆಯನ್ನು ಹೆಚ್ಚಿಸಲು ಸಹಕಾರಿಯಾಗಲಿದೆ ಎಂದು ಘೋಷಿಸಿರುತ್ತಾರೆ". ಅದರನ್ವಯ ಡಿಜಿಟಲ್ ಕೃಷಿ ಸೇವೆಗಳ ಕೇಂದ್ರವನ್ನು ಸ್ಥಾಪಿಸಿ ಮಂಡ್ಯ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರಾದೇಶಿಕ ದೂರ ಸಂವೇದಿ ಕೇಂದ್ರ, ಮಾರತ್‌ಹಳ್ಳಿ, ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ, ಬೆಂಗಳೂರು ರವರ ಸಂಯುಕ್ತಾಶ್ರಯದಲ್ಲಿ ಕಬ್ಬಿನಲ್ಲಿ ನಿಖರ ಕೃಷಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸಂಯುಕ್ತಾಶ್ರಯದಲ್ಲಿ ಕಬ್ಬಿನಲ್ಲಿ ನಿಖರ ಕೃಷಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. |

| | | |
|---|---|---|
| | | • ಕಬ್ಬು ಬೆಳೆಯಲ್ಲಿ ಕೃತಕ ಬುದ್ಧಿಮತ್ತೆ (AI) ತಂತ್ರಜ್ಞಾನ ಅಳವಡಿಸಲು ಸಕ್ಕರೆ ಕಾರ್ಖಾನೆಗಳ ಸಹಯೋಗದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಖಾಸಗಿ ಸಂಸ್ಥೆಯ ಸಹಯೋಗದಲ್ಲಿ ರಾಜ್ಯದ ನಾಲ್ಕು ಜಿಲ್ಲೆಗಳ ನಾಲ್ಕು ತಾಲೂಕುಗಳಲ್ಲಿ (ಆಳಂದ, ಮುಧೋಳ, ಇಂಡಿ ಮತ್ತು ಮದ್ದೂರು) ಪ್ರಾಯೋಗಿಕವಾಗಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಒಟ್ಟು 3,000 ಎಕರೆ ಕಬ್ಬು ಪ್ರದೇಶದಲ್ಲಿ AI ತಂತ್ರಜ್ಞಾನವನ್ನು ಅಳವಡಿಸಲಾಗುತ್ತದೆ. ಈ ತಂತ್ರಜ್ಞಾನದ ಮೂಲಕ ರೈತರಿಗೆ ನೀರು ಮತ್ತು ರಸಗೊಬ್ಬರಗಳ ವೈಜ್ಞಾನಿಕ ನಿರ್ವಹಣೆ ಕುರಿತು ನಿಖರವಾದ ತಾಂತ್ರಿಕ ಸಲಹೆಗಳನ್ನು ನೀಡಲಾಗುತ್ತದೆ. ಇದರಿಂದ ನೀರಿನ ಮತ್ತು ರಸಗೊಬ್ಬರಗಳ ಸಮರ್ಪಕ ಬಳಕೆ, ಉತ್ಪಾದನಾ ವೆಚ್ಚ ಕಡಿತ ಹಾಗೂ ಕಬ್ಬಿನ ಉತ್ಪಾದಕತೆ ಹೆಚ್ಚಳಕ್ಕೆ ಸಹಕಾರಿಯಾಗಲಿದೆ.<br>• ದೂರ ಸಂವೇದಿ ತಂತ್ರಜ್ಞಾನ, ಡ್ರೋನ್ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ (AI), ಜಿಯೋಸ್ಪೇಷಿಯಲ್ ಅನಲಿಟಿಕ್ಸ್ ಮತ್ತು ಇತರ ಆಧುನಿಕ ಡಿಜಿಟಲ್ ತಂತ್ರಜ್ಞಾನಗಳನ್ನು ಬಳಸಿಕೊಂಡು ರೈತರಿಗೆ ಕೃಷಿ/ತೋಟಗಾರಿಕೆ/ರೇಷ್ಮೆ/ಪಶು ವೈದ್ಯಕೀಯ ಮತ್ತು ಇತರೆ ಸಂಬಂಧಿತ ಸಲಹಾ ಸೇವೆ ಬಲಪಡಿಸಲು, ಬೆಳೆಗಳ ಮೇಲ್ವಿಚಾರಣೆ ಕೈಗೊಳ್ಳಲು ಮತ್ತು ನಿರ್ಧಾರ ತೆಗೆದುಕೊಳ್ಳುವ ವ್ಯವಸ್ಥೆಗಳನ್ನು ಸುಧಾರಿಸಲು ಮುಖ್ಯಮಂತ್ರಿ ರೈತ ಚೈತನ್ಯ - ಕರ್ನಾಟಕ ಅಗ್ರಿಟೆಕ್ ಮಿಷನ್ ಅನ್ನು ಜಾರಿಗೆ ತರಲಾಗುತ್ತಿದೆ. |

ಸಂಖ್ಯೆ: AGRI/126/ASC/2026

**(ಪಿ.ಎಂ.ನರೇಂದ್ರ ಸ್ವಾಮಿ)**

ಕೃಷಿ ಸಚಿವರು